# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:109 RNI NO.KAR KAN/2003/10452:No./PMG/KA/NK/BM/743/24-26 ಶುಕ್ರವಾರ ದಿನಾಂಕ: 22-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


### ಹೋಳಿ ಹಬ್ಬ ಹಾಗೂ ರಂಜಾನ್ ಮಾಸಾಚರಣೆ: ಶಾಂತಿ ಸಭೆ

# ಪರಸ್ಪರ ಸೌಹಾರ್ದತೆ ಹಾಗೂ ಎಂಸಿಸಿ ಅನ್ವಯ ಹಬ್ಬ ಆಚರಿಸಿ: ಡಿಸಿ ನಲಿನ್ ಅತುಲ್



ಕೊಪ್ಪಳ, ಮಾರ್ಚ್ 21 : ಹೋಳಿ ಹಬ್ಬ ಹಾಗೂ ರಂಜಾನ್ ಹಬ್ಬವನ್ನು ಎಲ್ಲ ಧಾರ್ಮಿಕ ಸಮುದಾಯದವರು ಪರಸ್ಪರ ಸೌಹಾರ್ದತೆ, ಸಹಕಾರದಿಂದ ಹಾಗೂ ಚುನಾವಣಾ ನೀತಿ ಸಂಹಿತೆ ಅನ್ವಯ ಆಚರಿಸಿ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಹೇಳಿದರು.

ಗುರುವಾರದಂದು ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಿದ್ದ ಹೋಳಿ ಹಬ್ಬ ಹಾಗೂ ರಂಜಾನ್ ಮಾಸಾಚರಣೆ ಕುರಿತ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ಲೋಕಸಭಾ ಚುನವಾಣೆಯ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಕೇವಲ ಚುನಾವಣೆ ಸಂಬಂಧಿತ ಕಾರ್ಯಕ್ರಮಗಳಲ್ಲದೆ, ಇನ್ನಿತರ ಯಾವುದೇ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಅನುಮತಿ ಪಡೆಯುವುದು ಕಡ್ಡಾಯವಾಗಿದೆ. ಜಿಲ್ಲೆಯಲ್ಲಿ ನಡೆಯುವ ಯಾವುದೇ ಕಾರ್ಯಕ್ರಮದಲ್ಲಿ ಚುನಾವಣಾ ಸಿಬ್ಬಂದಿ ಭಾಗವಹಿಸಿ ಇಡೀ ಕಾರ್ಯಕ್ರವನ್ನು ಚಿತ್ರೀಕರಣ ಮಾಡಿಕೊಳ್ಳುತ್ತಾರೆ. ಆದ್ದರಿಂದ ಹೋಳಿ ಹಬ್ಬದ ಅಂಗವಾಗಿ ಆಯೋಜಿಸುವ ಯಾವುದೇ ಕಾರ್ಯಕ್ರಮದಲ್ಲಿ ನೀತಿ ಸಂಹಿತೆ ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಮುಂದಿನ ವಾರದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಆರಂಭವಾಗಲಿದ್ದು, ಪರೀಕ್ಷೆಗೆ ತೆರಳುವ ವಿದ್ಯಾರ್ಥಿಗಳಿಗೆ ಬಣ್ಣ ಎರಚುವುದು, ಬಸ್ ತಡೆಯುವುದು ಮಾಡಬೇಡಿ. ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತದೆ. ಕಾಮ ದಹನ ಹಾಗೂ ಹೋಳಿ ಆಚರಣೆ ದಿನ ರಸ್ತೆ ಸಂಚಾರಕ್ಕೆ, ಸಾರ್ವಜನಕರಿಗೆ ತೊಂದರೆ ಆಗದಂತೆ ಹಬ್ಬ ಆಚರಿಸಬೇಕು. ಪ್ರಸ್ತುತ ರಂಜಾನ್ ಮಾಸವು ಆರಂಭವಾಗಿದ್ದು, ಇತರೆ ಧರ್ಮದವರ ಧಾರ್ಮಿಕ ಭಾವನೆಗೆ ಧಕ್ಕೆಯಾಗದಂತೆ, ಅವರ ಆಚರಣೆ, ನಂಬಿಕೆಗಳಿಗೆ ಅಡಚಣೆ ಆಗದಂತೆ ಸೌಹಾರ್ದತೆ ಹಾಗೂ ಪರಸ್ಪರ ಸಹಕಾರದಿಂದ ಹೋಳಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿಗಳು ಧಾರ್ಮಿಕ ಮುಖಂಡರಿಗೆ ಸೂಚಿಸಿದರು.

ಜಿಲ್ಲೆಯಾದ್ಯಂತ ಡಿಜೆ ಬಳಕೆಯನ್ನು ನಷೇಧಿಸಿದೆ. ಕರ್ಕಶ ಧ್ವನ ವರ್ಧಕಗಳನ್ನು ಸಹ ನಷೇಧಿಸಿದೆ. ಡಿಜೆ ಹಾಗೂ ಕರ್ಕಶ ಧ್ವನವರ್ಧಕಗಳು ಶಬ್ದಮಾಲಿನ್ಯದ ಜೊತೆಗೆ ತೀವ್ರತರ ಅನಾರೋಗ್ಯದಿಂದ ಬಳಲುತ್ತಿರುವವರ ಜೀವಕ್ಕೆ ಅಪಾಯವನ್ನು ತಂದೊಡ್ಡ ಬಹುದು. ಆದ್ದರಿಂದ ಯಾವುದೇ ಕಾರಣಕ್ಕೂ ಹೋಳಿ ಆಚರಣೆ ಮಾತ್ರವಲ್ಲದೆ ಯಾವುದೇ ಕಾರ್ಯಕ್ರಮದಲ್ಲಿ ಡಿಜೆ ಬಳಕೆ ಮಾಡುಂವಂತಿಲ್ಲ. ಹೋಳಿ ಸಂದರ್ಭ ಆಯಾ ಪ್ರದೇಶಕ್ಕೆ ಅನುಗುಣವಾಗಿ ಮದ್ಯ ಮಾರಾಟ ನಷೇಧಿಸಲಾಗುವುದು. ನಷೇಧದ ನಂತರವೂ ಮದ್ಯ ಮಾರಾಟ, ದಾಸ್ತಾನು ಕಂಡುಬಂದಲ್ಲಿ ಅಂತವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ.

(2 ನೇ ಪುಟಕ್ಕೆ)

## ಕಂಟೋನ್ಮೆಂಟ್ ಬೋರ್ಡ್ ಬೆಳಗಾವಿ ಪ್ರದೇಶಕ್ಕೆ ಭಾರಿ ವಾಹನಗಳ ಪ್ರವೇಶ ನಿಷೇದ

ಬೆಳಗಾವಿ: ಕಂಟೋನ್ಮೆಂಟ್ ಬೋರ್ಡ್ ಬೆಳಗಾವಿ ಪ್ರದೇಶಕ್ಕೆ ಭಾರಿ ವಾಹನಗಳ ಪ್ರವೇಶ ನಷೇಧಿಸಿ ಹೊಸ ನಯುವುಗಳನ್ನು ಜಾರಿಗೆ ತಂದಿದೆ. ನರ್ಬಂಧವನ್ನು ಜಾರಿಗೊಳಿಸಲು ನಗರದ ಗ್ಲೋಬ್ ಸರ್ಕಲ್ ಮತ್ತು ಗಾಂಧಿ ಸರ್ಕಲ್ ಕ್ಲಬ್ ರಸ್ತೆ ಬಳಿ ಶಸ್ತ್ರಸಜ್ಜಿತ ಸಿಬ್ಬಂದಿಯನ್ನು ನಯೋಜಿಸಲಾಗಿದೆ.

ಇತ್ತೀಚೆಗೆ ನಡೆದ ಆಡಳಿತ ಮಂಡಳಿ ಸಭೆಯಲ್ಲಿ ಈ ನರ್ಧಾರ ಕೈಗೊಳ್ಳಲಾಗಿದೆ. ಕಂಟೋನ್ಮೆಂಟ್ ಪ್ರದೇಶದಲ್ಲಿ ಹೆಚ್ಚಿನ ವಾಹನ ದಟ್ಟಣೆ ಇರುವ ಪ್ರದೇಶದಲ್ಲಿ ವಿದ್ಯಾರ್ಥಿಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಭಾರೀ ವಾಹನಗಳ ಪ್ರವೇಶವನ್ನು ನಷೇಧಿಸಲು ಕಂಟೋನ್ಮೆಂಟ್ ಮಂಡಳಿ ನರ್ಧರಿಸಿದೆ. ಆದ್ದರಿಂದ ಸಾಯಿನಾಥ್ ಸಶಸ್ತ್ರ ಜವಾನ್ ಅವರು ಪ್ರಸ್ತುತ ಗ್ಲೋಬ್ ಸರ್ಕಲ್ ಮತ್ತು ಗಾಂಧಿ ಸರ್ಕಲ್ ಕ್ಲಬ್ ರಸ್ತೆಯಲ್ಲಿ ಭಾರೀ ವಾಹನಗಳನ್ನು ನರ್ದೇಶಿಸುತ್ತಿದ್ದಾರೆ. ಸಲಹೆಗಳನ್ನು ಮಾಡುವುದು. ಅಲ್ಲದೆ ಇದೀಗ ಕುಮನಣಿ ವೃತ್ತದಲ್ಲಿ ಹಲವು ವಾಹನಗಳನ್ನು ತಡೆದು ಯೂನಯನ್ ಜಿಮಖಾನಾ ಮೂಲಕ ವಾಹನಗಳಿಗೆ ತೆರಳುವಂತೆ ಸೂಚನೆ ನೀಡಲಾಗುತ್ತಿದೆ.

ಇನ್ನು ಈ ರಸ್ತೆಯಲ್ಲೂ ಹಲವು ಶಾಲೆಗಳಿದ್ದು, ಈ ಹಿಂದೆ ಭಾರಿ ವಾಹನಗಳು ಹರಿದು ಹಲವು ಮಂದಿ ಪ್ರಾಣ ಕಳೆದುಕೊಂಡಿರುವುದನ್ನು ಪರಿಗಣಿಸಿ ಭಾರೀ ವಾಹನಗಳ ಸಂಚಾರ ಬಂದ್ ಮಾಡಲು ನರ್ಧರಿಸಲಾಗಿದೆ.

## ಸಬ್ ರಜಿಸ್ಟ್ರಾರ ಕಚೇರಿಯಲ್ಲಿ ಶಾರ್ಟ್ ಸರ್ಕ್ಯೂಟ್ ಅಗ್ನಿಅವಘಡ




ಬೆಳಗಾವಿ ಉತ್ತರ ಮತ ಕ್ಷೇತ್ರದಲ್ಲಿರುವ ಸಬ್ ರಿಜಿಸ್ಟ್ರಾರ್ ಕಚೇರಿಗೆ ಆಕಸ್ಮಿಕ ಬೆಂಕಿ ತಗುಲಿದೆ ಬೆಳಗಾವಿ ಉತ್ತರ ಮತ ಕ್ಷೇತ್ರದಲ್ಲಿರುವ ಸಬ್ ರಿಜಿಸ್ಟರ್ ಕಚೇರಿಗೆ ಇಂದು ಮಧ್ಯಾಹ ಶಾರ್ಟ್ ಸರ್ಕ್ಯೂಟ್ ಅಗ್ನಿಅವಘಡ ಸಂಭವಿಸಿದ್ದು, ಅದೃಷ್ಟವಶಾತ್ ಕೆಲಸ ಮಾಡುತ್ತೀದ ಸಿಬ್ಬಂದಿಗಳಿಗೆ, ಹಾಗೂ ಪಿಠೋಪಕರಣಗಳಿಗೆ ಯಾವುದೇ ಹಾನಯಾ ಗಿಲ್ಲ, ಸಿಬ್ಬಂದಿಗಳು ಅಗ್ನಿ ಶಾಮಕ ದಳಕ್ಕೆ ಕರೆ ಮಾಡಿ ದೊಡ್ಡ ಅನಾಹುತ ತಪ್ಪಿಸಿದ್ದಾರೆ ಉಪ ನೊಂದಣೆ ಕಚೇರಿ ಶಾರ್ಟ್ ಸರ್ಕ್ಯೂಟ್ ಬಗ್ಗೆ ಮಾತನಾಡಿದ ಕಾವೇರಿ ತಂತ್ರಾಶ ಸಹಾಯಕ ಮ್ಯಾನೇಜರ್ ರಾಮಕೃಷ್ಣ ಟಿ.ಎಂ ಬೆಳಗಾವಿ ಉತ್ತರದ ಕ್ಷೇತ್ರದ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಮಧ್ಯಾಹ ಹೊತ್ತಿಗೆ ಫ್ಯಾನ್ ಹತ್ತಿರ ಶಾರ್ಟ್ ಸರ್ಕ್ಯೂ ಟ್ ವಾಯಿತ್ತು, ತಕ್ಷಣ ಎಲ್ಲರನ್ನೂ ಹೊರ ಕಳಿಸ ಲಾ ಯಿತ್ತು,ಯಾರಿಗೂ ಏನೂ ಆಗಿಲ್ಲ, ಯಾವು ದೇ ಪೀಠೋಪಕರಣ ಗಳಿಗೂ ಹಾನಿಯಾ ಗಿಲ್ಲ ಎಂದು ತಿಳಿಸಿದರು

## ಇಂದು ಶ್ರೀ ರೇಣುಕಾಚಾರ್ಯ ಜಯಂತಿ

ಗದಗ ಮಾರ್ಚ 21: ಸರ್ಕಾರದ ಆದೇಶದಂತೆ ಲೋಕಸಭೆ ಚುನಾವಣಾ–2024 ರ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಶ್ರೀ ರೇಣುಕಾಚಾರ್ಯರ ಜಯಂತಿಯನ್ನು ಮಾರ್ಚ 23 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಾಯುಕ್ತ ಬಲೆಗೆ ಬಿದ್ದ ತಹಶೀಲ್ದಾರ



ತುಮಕೂರು: ತುಮಕೂರಿನಲ್ಲಿ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ ತಹಶೀಲ್ದಾರ್ ಗೀತಾ ಲೋಕಾಯುಕ್ತ ಬಲೆಗೆ ಬಿದ್ದ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್ ಆಗಿದ್ದು, ಚಿಕ್ಕನಾಯಕನಹಳ್ಳಿ ತಾಲೂಕಿನ ಗೋಡೆಕೆರೆ ಗ್ರಾಮದ ರೈತ ಮಲ್ಲಿಕಾರ್ಜುನ್?ಗೆ ಸೇರಿದ 33 ಗುಂಟೆ ಜಮೀನನ್ನ ಭೂ ಪರಿವರ್ತನೆ ಮಾಡಿಕೊಡಲು 3 ಲಕ್ಷ ರೂಪಾಯಿ ಲಂಚಕ್ಕೆ ಬೇಡಿಕೆಯಿಟ್ಟಿದ್ದರು ಎನ್ನಲಾಗಿದೆ. ನಿನ್ನೆ ಬೆಳಗ್ಗೆ 20 ಸಾವಿರ ಹಣ ರೂಪಾಯಿ ಪಡೆದಿದ್ದ ತಹಶೀಲ್ದಾರ್ ಗೀತಾ, ನಿನ್ನೆ ಸಂಜೆ 30 ಸಾವಿರ ರೂಪಾಯಿ ಹಣ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಸಿಲುಕಿದ್ದಾರೆ.

ಮನೆಗೆ ಕರೆಸಿಕೊಂಡು ತಹಶೀಲ್ದಾರ್ ಲಂಚ ಸ್ವೀಕರಿಸುವ ವೇಳೆ ಸಿಕ್ಕಿಬಿದ್ದಿದ್ದಾರೆ. ತುಮಕೂರು ಲೋಕಾಯುಕ್ತ ಡಿವೈಎಸ್ ಪಿ ರಾಮಕೃಷ್ಣ ಹಾಗೂ ಉಮಾಶಂಕರ್ ನೇತೃತ್ವದಲ್ಲಿ ಕಾರ್ಯಚರಣೆ ನಡೆಸಿ, ಚಿಕ್ಕನಾಯಕನಹಳ್ಳಿ ತಹಶೀಲ್ದಾರ್ ಗೀತಾರನ್ನ ವಶಕ್ಕೆ ಪಡೆದುಕೊಂಡಿದ್ದಾರೆ. ಸದ್ಯ ಲಂಚಬಾಕ ಅಧಿಕಾರಿಯನ್ನುವಿಚಾರಣೆಯನ್ನು ಲೋಕಾಯುಕ್ತ ಅಧಿಕಾರಿಗಳು ಮುಂದುವರಿಸಿದ್ದಾರೆ.

## ಅನಧೀಕೃತ ನಳ ಸಂಪರ್ಕ ಕಡಿತಗೊಳಿಸುವಿಕೆಗೆ ಚಾಲನೆ

ಬೆಳಗಾವಿ : ನಗರದಲ್ಲಿ ಅನಧೀಕೃತ ನಳಗಳನ್ನು ಹೊಂದಿರುವ ಹಾಗೂ ನೀರಿನ ಕರ ಬಾಕಿ ಉಳಿಸಿಕೊಂಡವರ ನಳ ಸಂಪರ್ಕಗಳನ್ನು ಕಡಿತಗೊಳಿಸಲು ಆರಂಭಿಸಲಾಗಿದೆ. ಈಗಾಗಲೇ ನಗರವು ಬೇಸಿಗೆ ಸಂದರ್ಭದಲ್ಲಿ ನೀರಿನ ಅಭಾವವನ್ನು ಎದುರಿಸುತ್ತಿದೆ. ಸಾರ್ವಜನಕರು ನೀರನ್ನು ಮಿತವಾಗಿ ಬಳಸಲು ಹಲವಾರು ಬಾರಿ ಮನವಿ ಮಾಡಲಾಗಿದೆ. ಅಲ್ಲದೇ ಅನಧೀಕೃತ ನಳಗಳನ್ನು ಅಧೀಕೃತಗೊಳಿಸಿಕೊಳ್ಳಲು ಮಾರ್ಚ 31, 2024 ರವರೆಗೆ ಗಡವು ನೀಡಿದ್ದು, ಸಂಬಂಧಿಸಿದ ಅನಧೀಕೃತ ನಳ ಸಂಪರ್ಕದಾರರು ಕೂಡಲೇ ಅಧೀಕೃತಗೊಳಿಸಿಕೊಳ್ಳಲು ಮತ್ತೊಮ್ಮೆ ವಿನಂತಿಸಲಾಗಿದೆ.

ಅಲ್ಲದೇ, ಒತ್ತಡ ಸಹಿತ ನೀರು ಸರಬರಾಜು ಆಗುತ್ತಿದ್ದರೂ, ಸಾರ್ವಜನಕರು ತಮ್ಮ ಮನೆ ನಳಕ್ಕೆ ನೀರು ಬಂದಾಗ ಯಾ ಮೋಟರ ಹಚ್ಚಿತ್ತಿರುವುದು ಕಂಡುಬಂದಿದೆ. ಇದರಿಂದ ಬಡಾವಣೆಯ ಅಥವಾ ಪ್ರದೇಶದ ಕೊನೆಯಲ್ಲಿರುವ ಮನೆಗಳಿಗೆ ನೀರು ಸಿಗದಂತಾಗುತ್ತದೆ. ಕಾರಣ ಯಾರೂ ಕೂಡ ಮೋಟರ ಬಳಸಬಾರದೆಂದು, ಹಾಗೇನಾದರೂ ಮೋಟರ ಹಚ್ಚುವುದು ಕಂಡುಬಂದಲ್ಲಿ ಮುಟ್ಟುಗೋಲು ಹಾಕಲಾಗುವುದು. ಹಾಗೂ ನೀರಿನ ಕರವನ್ನು ಕಾಲಕಾಲಕ್ಕೆ ಭರಿಸಬೇಕೆಂದು ಹಾಗೂ ಅನಧೀಕೃತ ನಳಗಳನ್ನು ಅಧೀಕೃತಗೊಳಿಸಿಕೊಳ್ಳಲು ಅಥವಾ ನೀರು ಸರಬರಾಜಿಗೆ ಸಂಬಂಧಿಸಿದಂತೆ ಸಮಸ್ಯೆಗಳಿದ್ದಲ್ಲಿ ಟೋಲ್ ಫ್ರಿ ನಂಬರ 18004255656 ಅಥವಾ ಕಚೇರಿ ದೂರವಾಣೆ ಸಂಖ್ಯೆ 0831–2462933 ಗೆ ಕರೆ ಮಾಡಲು ಮಹಾನಗರ ಪಾಲಿಕೆ ಪರವಾಗಿ ಈ ಮೂಲಕ ವಿನಂತಿಸಲಾಗಿದೆ.

## ಬಿಜೆಪಿ : ಐದು ಹಾಲಿ ಸಂಸದರಿಗೆ ಟಿಕೆಟ್ ಕೈತಪ್ಪುವ ಸಾಧ್ಯತೆ

ಬೆಂಗಳೂರು : ರಾಜ್ಯದಲ್ಲಿ ಬಾಕಿ ಇರುವ ಲೋಕಸಭಾ ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಗಳ ಎರಡನೇ ಪಟ್ಟಿ ಶುಕ್ರವಾರ ಪ್ರಕಟವಾಗಲಿದ್ದು, ಐದು ಲೋಕಸಭಾ ಕ್ಷೆ?ತ್ರಗಳಲ್ಲಿ ಬಿಜೆಪಿ ಹುರಿಯಾಳುಗಳು ಯಾರಾಗಲಿದ್ದಾರೆ ಎಂಬ ಕುತೂಹಲಕ್ಕೆ ತೆರೆಬೀಳಲು ಇನ್ನೂ ಒಂದೆರಡು ದಿನ ಕಾಯಬೇಕಿದೆ. ದಿಲ್ಲಿಯಲ್ಲಿ ಮಂಗಳವಾರ ರಾತ್ರಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್ ಅಶೋಕ್ ಇತರರೊಂದಿಗೆ ವಿಸ್ತೃತ ಚರ್ಚೆ ನಡೆಸಿದರು.

ಉತ್ತರ ಕನ್ನಡ, ಬೆಳಗಾವಿ, ರಾಯಚೂರು, ಚಿಕ್ಕಬಳ್ಳಾಪುರ ಹಾಗೂ ಚಿತ್ರದುರ್ಗ ಕ್ಷೆ?ತ್ರದ ಅಭ್ಯರ್ಥಿಗಳ ಆಯ್ಕೆ ಸಂಬಂಧ ಸಮಾಲೋಚನೆ ನಡೆಯಿತು. ಈ ಐದೂ ಕ್ಷೆ?ತ್ರಗಳಲ್ಲಿ ಬಿಜೆಪಿ ಸಂಸದರಿದ್ದು, ಬಹುತೇಕರಿಗೆ ಈ ಬಾರಿ ಟಿಕೆಟ್ ಕೈತಪ್ಪುವುದು ಖಚಿತವಾಗಿದೆ. ಹಾಗಾಗಿ ಪ್ರತಿರೋಧ ಸೃಷ್ಟಿಯಾಗದಂತೆ ನಿಯಂತ್ರಿಸುವ ಜತೆಗೆ ಗೆಲ್ಲುವ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಬಗ್ಗೆ ರಾಷ್ಟ್ರೀಯ ನಾಯಕರು, ರಾಜ್ಯ ನಾಯಕರೊಂದಿಗೆ ಚರ್ಚಿಸಿದ್ದಾರೆ. ಅಮಿತ್ ಶಾ ಹಾಗೂ ಜೆಪಿ ನಡ್ಡಾ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಸಮಾಲೋಚಿಸಿ ಅಭ್ಯರ್ಥಿಗಳನ್ನು ಅಂತಿಮಗೊಳಿಸಲಿದ್ದಾರೆ. ಆ ಬಳಿಕವಷ್ಟೆ? ಪಟ್ಟಿ ಪ್ರಕಟವಾಗಲಿದೆ ಎಂದು ಮೂಲಗಳು ಹೇಳಿವೆ.

ಈ ಕುರಿತು ಪ್ರತಿಕ್ರಿಯಿಸಿದ ಯಡಿಯೂರಪ್ಪ, "ಈಗಾಗಲೇ ರಾಜ್ಯದಲ್ಲಿ 20 ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗಿದ್ದು, ಬಿಜೆಪಿ ಪಾಲಿನ ಬಾಕಿ ಕ್ಷೆ?ತ್ರಗಳಿಗೆ ಶುಕ್ರವಾರ ಅಭ್ಯರ್ಥಿಗಳ ಪಟ್ಟಿ ಬಿಡುಗಡೆಯಾಗಲಿದೆ," ಎಂದು ಹೇಳಿದರು. "ರಾಷ್ಟ್ರೀಯ ನಾಯಕರಾದ ಅಮಿತ್ ಶಾ, ಜೆಪಿ ನಡ್ಡಾ ಅವರೊಂದಿಗೆ ಐದು ಕ್ಷೆ?ತ್ರಗಳ ಅಭ್ಯರ್ಥಿಗಳ ಕುರಿತಂತೆ ಚರ್ಚಿಸಲಾಗಿದೆ. ಈ ಕ್ಷೇತ್ರಗಳ ಅಭ್ಯರ್ಥಿಗಳ ಆಯ್ಕೆ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ. ಪಟ್ಟಿ ಬಿಡುಗಡೆ ನಂತರ ರಾಜ್ಯ ಪ್ರವಾಸ ಆರಂಭಿಸಲಾಗುವುದು," ಎಂದು ಹೇಳಿದರು.

### ಲೋಕಸಭೆ ಚುನಾವಣೆ; ಮಾಧ್ಯಮ ಕಣ್ಗಾವಲು ಘಟಕದ ಸಭೆ

## ಚುನಾವಣಾ ಪ್ರಚಾರ–ಮಾಧ್ಯಮಗಳ ಮೇಲೆ ನಿಗಾ: ಗುರುನಾಥ ಕಡಬೂರ

ಬೆಳಗಾವಿ,ಮಾ.21 : ಲೋಕಸಭಾ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ನಡೆಸುವುದು ನಮ್ಮೆಲ್ಲರ ಕರ್ತವ್ಯ. ಈ ನಟ್ಟಿನಲ್ಲಿ ಎಲ್ಲರೂ ಅಚ್ಚುಕಟ್ಟಾಗಿ ಕಾರ್ಯ ನರ್ವಹಿಸುವ ಮೂಲಕ ಚುನಾವಣೆ ಪ್ರಕ್ರಿಯೆ ಯಶಸ್ವಿಗೆ ಶ್ರಮಿಸಬೇಕು ಎಂದು ವಾರ್ತಾ ಇಲಾಖೆ ಉಪ ನರ್ದೇಶಕ ಹಾಗೂ ಮಾಧ್ಯಮ ಕಣ್ಗಾವಲು ಘಟಕದ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಅವರು ತಿಳಿಸಿದರು.

ಲೋಕಸಭಾ ಉಪಚುನಾವಣೆಗೆ ಸಂಬಂಧಿಸಿದಂತೆ ನಗರದ ವಾರ್ತಾ ಭವನದಲ್ಲಿ ಗುರುವಾರ (ಮಾ.21) ನಡೆದ ಜಿಲ್ಲಾ ಮಾಧ್ಯಮ ಕಣ್ಗಾವಲು ಘಟಕದ ಸದಸ್ಯರ ಸಭೆಯಲ್ಲಿ ಅವರು ಮಾತನಾಡಿದರು.

ಅಭ್ಯರ್ಥಿಗಳು ತಮ್ಮ ಸ್ವಂತ ಫೇಸ್ಬುಕ್ ಖಾತೆ ಸೇರಿದಂತೆ ಇತರೆ ಸಾಮಾಜಿಕ ಜಾಲತಾಣಗಳಲ್ಲಿ ಬೇರೆಯವರ ಮಾನಹಾನ, ನಂಬಿಕೆ, ಗೌರವಕ್ಕೆ ಧಕ್ಕೆ ತರುವಂತಹ ವಿಳಯಗಳನ್ನು ಹಂಚಿಕೊಂಡರೆ ಅಂಥವುಗಳನ್ನು ಗಮನಸಿ ಚುನಾವಣಾಧಿಕಾರಿಗಳಿಗೆ ವರದಿ ನೀಡಬೇಕು. ಸಾಮಾಜಿಕ ಜಾಲತಾಣಗಳಲ್ಲಿ ವೈಯಕ್ತಿಕ ಖಾತೆಗಳ ಮೂಲಕ ವೈಯಕ್ತಿಕ ಅನಸಿಕೆ, ಅಭಿಪ್ರಾಯವನ್ನು ಹಂಚಿಕೊಳ್ಳಲು ಸಾರ್ವಜನಕರು ಹಾಗೂ ಅಭ್ಯರ್ಥಿಗಳಿಗೆ ಅವಕಾಶವಿರುತ್ತದೆ. ಆದರೆ ಅಭ್ಯರ್ಥಿಗಳು ಏಕಕಾಲದಲ್ಲಿ ಲಕ್ಷಾಂತರ ಜನರನ್ನು ತಲುಪಲು ಗೂಗಲ್ ಅಥವಾ ಫೇಸಬುಕ್ ಮೂಲಕ ಕೈಗೊಳ್ಳುವ ಚುನಾವಣಾ ಪ್ರಚಾರದ ವಿಳಯವಸ್ತುವಿಗೆ ಕಡ್ಡಾಯವಾಗಿ ಪ್ರಮಾಣೀಕರಣ ಪಡೆಯಬೇಕು ಎಂದು ತಿಳಿಸಿದರು.

ಚುನಾವಣೆಗೆ ಸಂಬಂಧಿಸಿದಂತೆ ಆಡಿಯೋ–ವಿಳುವಲ್ ಪ್ರಚಾರ ಕೈಗೊಳ್ಳುವುದಕ್ಕಿಂತ ಮೊದಲು ಅಭ್ಯರ್ಥಿಗಳು ಎಂಸಿಎಂಸಿ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯುವುದು ಅಗತ್ಯವಿರುವುದರಿಂದ ನಯೋಜಿತ ಅಧಿಕಾರಿ, ಸಿಬ್ಬಂದಿಗಳು ವಿಡಿಯೋಗಳನ್ನು ಸೂಕ್ಷ್ಮವಾಗಿ ಗಮನಸಬೇಕು ಎಂದು ಹೇಳಿದರು.



ಅಭ್ಯರ್ಥಿಗಳ ಚುನಾವಣಾ ಖರ್ಚು–ವೆಚ್ಚಗಳ ಮೇಲೆ ನಗಾ ವಹಿಸಲು ಅನುಕೂಲವಾಗುವಂತೆ ಮಾಧ್ಯಮ ಕಣ್ಗಾವಲು ಘಟಕ ಕಾರ್ಯ ನರ್ವಹಿಸಬೇಕು. ಟಿವಿ, ಕೇಬಲ್ ಟಿವಿ, ಎಲ್.ಇ.ಡಿ. ವಾಹನಗಳ ಮೂಲಕ ಪ್ರಚಾರ, ಆಡಿಯೋ ಪ್ರಚಾರ, ಬಲ್ಕ್ ಎಸ್.ಎಂ.ಎಸ್, ವಾಟ್ಸಾಪ್ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರಕ್ಕಾಗಿ ಎಂಸಿಎಂಸಿ.ಯಿಂದ ಪೂರ್ವಾನುಮತಿ ಪಡೆಯಲು ಬರುವ ಅರ್ಜಿಗಳನ್ನು ಪರಿಶೀಲಿಸಿ ಮೇಲಾಧಿಕಾರಿಗಳಿಗೆ ತಿಳಿಸಬೇಕು ಎಂದು ಮಾಧ್ಯಮ ಕಣ್ಗಾವಲು ಘಟಕದ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಅವರು ಹೇಳಿದರು.ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಮಾಧ್ಯಮ ಕಣ್ಗಾವಲು ಘಟಕದ ನೋಡಲ್ ಅಧಿಕಾರಿ ವಿಜಯಕುಮಾರ ಬೆಟಗೇರಿ, ಸಣ್ಣ ಉಳಿತಾಯ ಖಾತೆ ಸಹಾಯಕ ನರ್ದೇಶಕ ಎಂ.ವಿ ಕಂಗ್ರಾಳಕಾರ, ಸಿಟಿಇ ಕಾಲೇಜಿನ ಉಪನ್ಯಾಸಕಿ ಪ್ರೊ. ಝಡ್.ಜಿ ಸಯ್ಯದ್, ವಾರ್ತಾ ಇಲಾಖೆ ಸಿಬ್ಬಂದಿಗಳಾದ ಅನಂತ ಪಪ್ಪು, ಎಂ.ಎಲ್ ಜಮಾದರ, ಶಿಕ್ಷಣ ಇಲಾಖೆಯ ಶ್ರೀಮತಿ ಎಂ.ಎಂ ಪಾಟೀಲ, ಎಸ್.ಎಸ್. ನಾಗನೂರ, ಮಹಾದೇವ ನಚ್ಚಣಕಿ ಮತ್ತು ಮಾಧ್ಯಮ ಕಣ್ಗಾವಲು ಘಟಕದ ನಯೋಜಿತ ಅಧಿಕಾರಿಗಳು ಮತ್ತು ಸಿಬ್ಬಂದಿ ಸಭೆಯಲ್ಲಿ ಉಪಸ್ಥಿತರಿದ್ದರು.

### ಉದ್ಯೋಗ ಖಾತ್ರಿ ದುಡಿಮೆ ಖಾತ್ರಿ ಅಭಿಯಾನ

## ಏಪ್ರಿಲ್ 1 ರಿಂದ ಉದ್ಯೋಗ ಖಾತ್ರಿಯಲ್ಲಿ ಕೆಲಸ ಪ್ರಾರಂಭಿಸಿ: ಇ ಓ ಮಾಣಿಕರಾವ್ ಪಾಟೀಲ್

ಗದಗ: ತಾಲೂಕಿನ ಕುರ್ತಕೋಟಿ ಗ್ರಾಮ ಪಂಚಾಯತಿಯಲ್ಲಿ ಇಂದು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ "ವಲಸೆ ಯಾಕ್ರೀ, ನಮ್ಮೂರಲ್ಲೇ ಉದ್ಯೋಗ ಖಾತ್ರಿ / ಉದ್ಯೋಗ ಖಾತ್ರಿ ದುಡಿಮೆ ಖಾತ್ರಿ" ಅಭಿಯಾನದಡಿ ಕಾಯಕ ಬಂಧುಗಳ, ಸ್ವಸಹಾಯ ಸಂಘಗಳ ಸದಸ್ಯರ ಸಭೆ ನಡೆಸಲಾಯಿತು.

ಈ ವೇಳೆ ತಾಲೂಕ ಪಂಚಾಯತ ಗದಗ ಇ ಓ ಶ್ರೀ ಮಾಣಿಕರಾವ್ ಪಾಟೀಲ್ ಏಪ್ರೀಲ್ 1 ರಿಂದ ಕೂಲಿಕಾರರಿಗೆ ಕೆಲಸ ನೀಡಲಾಗುತ್ತಿದ್ದು, ಕಾಯಕ ಬಂಧುಗಳು ಕೂಲಿಕಾರರಿಂದ ನಮೂನೆ 6 ಸಂಗ್ರಹಿಸಬೇಕು. ಕಳೆದ ವರ್ಷಕ್ಕಿಂತ ಈ ವರ್ಷ ಬೇಗನೆ ಕೆಲಸ ನೀಡುವ ಮೂಲಕ ಗುಳೆ ತಪ್ಪಿಸಿ ಸ್ಥಳಿಯವಾಗಿ ಕೆಲಸ ನೀಡಲಾಗುತ್ತಿದೆ ಎಂದರು.

ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಕೂಲಿಕಾರರಿಗೆ ಉದ್ಯೋಗ ಕೊಡಲಿದ್ದು, ತಾವುಗಳು ತಮ್ಮ ಕೂಲಿಕಾರರ ಆಧಾರ ಸಂಖ್ಯೆಗೆ ಬ್ಯಾಂಕ್ ಖಾತೆ ಸಂಖ್ಯೆ ಲಿಂಕ್ ಹಾಗೂ ಉದ್ಯೋಗ ಚೀಟಿ ಓಅಕಖ ಲಿಂಕ್ ಕಡ್ಡಾಯವಾಗಿ ಮಾಡಿಸಬೇಕು. ಕೆಲಸದ ಸ್ಥಳಗಳಲ್ಲಿ ಕೂಲಿಕಾರರಿಗೆ ಪ್ರಥಮ ಚಿಕಿತ್ಸೆ, ನೆರಳು,ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತದೆ ಎಂದು ತಿಳಿಸಿದರು.




ಈ ಬಾರಿ ಕೂಲಿಕಾರರು ಕೆಲಸದ ಸ್ಥಳದಲ್ಲಿ ಮಕ್ಕಳನ್ನು ಕರೆತರಬಾರದು ಅದಕ್ಕಾಗಿ ಆರು ತಿಂಗಳಿಂದ ಮೂರು ವರ್ಷದ ಮಕ್ಕಳಿಗೆ ನಮ್ಮ ಗ್ರಾಮ ಪಂಚಾಯತಿಯಿಂದ ಕೂಸಿನ ಮನೆ ಆರಂಭಮಾಡಿದ್ದು,ತಾವುಗಳು ತಮ್ಮ ಮಕ್ಕಳನ್ನು ಅಲ್ಲಿಯೇ ಬಿಟ್ಟಿ ಕೆಲಸಕ್ಕೆ ಹೋಗಬೇಕು ಎಂದರು.

ಸಹಾಯಕ ನರ್ದೇಶಕರಾದ (ಗ್ರಾಮೀಣ ಉದ್ಯೋಗ) ಶ್ರೀ ಕುಮಾರ್ ಪೂಜಾರ್ ಮಾತನಾಡಿ ಕೆಲಸದ ಸ್ಥಳದಲ್ಲಿ ಕೂಲಿಕಾರರ ಹಾಜರಾತಿಯನ್ನು ಎರಡು ಹಂತದಲ್ಲಿಓಒಒಖ ಆ?ಯಪ್ ನಲ್ಲಿ ಸೆರೆಹಿಡಿಯಬೇಕು.ಕೂಲಿಕಾರರಿಗೆ ಯಾವುದೇ ತೋಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಲೆಕ್ಕಧಿಕಾರಿ, ಗ್ರಾ.ಪಂ ಪಿಡಿಓ. ನರೇಗಾ ಸಿಬ್ಬಂದಿಗಳು ಹಾಗೂ ಕಾಯಕ ಬಂಧುಗಳು, ಸ್ವಸಹಾಯ ಸಂಘದ ಸದಸ್ಯರು, ಮತ್ತು ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

## ಸಚಿವೆ ಹೆಬ್ಬಾಳ್ಕರ್ ಪುತ್ರನಿಗೆ ಟಿಕೇಟ ಫಿಕ್ಸ್ ; ಡಿಕೆಶಿ ಬೇಟಿಯಾದ ಕುಟುಂಬ



ಬೆಳಗಾವಿ : ಕುಂದಾನಗರಿ ಲೋಕಸಭಾ ಅಖಾಡಕ್ಕೆ ಈ ಬಾರಿ ಕಾಂಗ್ರೆಸ್ ಪಕ್ಷದಿಂದ ಸಚಿವೆ ಹೆಬ್ಬಾಳ್ಕರ್ ಪುತ್ರ ಮೃನಾಲ್ ಅವರ ಹೆಸರು ಖಚಿತವಾದ ಹಿನ್ನಲೆಯಲ್ಲಿ ಬೆಂಗಳೂರಿನಲ್ಲಿ ಡಿಸಿಎಂ ಡಿ.ಕೆ ಶಿವಕುಮಾರ ಅವರನ್ನು ಭೇಟಿಯಾಗಿ ಹೆಬ್ಬಾಳ್ಕರ್ ಕುಟುಂಬದವರು ಆಶೀರ್ವಾದ ಪಡೆದರು.

ಬೆಳಗಾವಿ ಲೋಕಸಭಾ ಕ್ಷೇತ್ರ ಗೆಲ್ಲಲು ಈ ಬಾರಿ ಕಾಂಗ್ರೆಸ್ ಪೈಪೋಟಿ ನಡೆಸಿದ್ದು ಯುವ ಅಭ್ಯರ್ಥಿ ಕಣಕ್ಕಿಳಿಸುವ ಮೂಲಕ ರಣತಂತ್ರ ಹೆಣೆದಿದೆ.

ಕಳೆದ ಹಲವು ವರ್ಷಗಳಿಂದ ಬೆಳಗಾವಿ ಕಾಂಗ್ರೆಸ್ ಘಟಕದಲ್ಲಿ ಸಕ್ರಿಯವಾಗಿ ಕೆಲಸ ಮಾಡಿರುವ ಮೃನಾಲ್ ಅವರಿಗೆ ಕೈ ಟಿಕೆಟ್ ನೀಡಲಾಗಿದೆ.

ಸೌಮ್ಯ ಸ್ವಭಾವದ ಮೃನಾಲ್ ಹೆಬ್ಬಾಳ್ಕರ್ ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರವಾಗಿ ಕೆಲಸ ಮಾಡುವ ಮೂಲಕ ಅವರ ಗೆಲುವಿಗೆ ಶ್ರಮವಹಿಸಿದ್ದರು. ಇದೇ ಕಾರಣಕ್ಕೆ ಕಾಂಗ್ರೆಸ್ ಹೈಕಮಾಂಡ್ ಟಿಕೆಟ್ ನೀಡಿದೆ.